ವಿಷಯ / ವಿಷಯ : DEPARTMENT / SUBJECT:
ಪತ್ರಿಕೆಯ ಹೆಸರು : NAME OF THE NEWS PAPER:
ದಿನಾಂಕ : DATE: 16/6/20

ಆನ್‌ಲೈನ್ ಮೂಲಕ ಸಿಎಂ ಚಾಲನೆ ಸೋಗಾನೆ ಗ್ರಾಮದ 662.38 ಎಕರೆಯಲ್ಲಿ ನಿರ್ಮಾಣ

ಶಿವಮೊಗ್ಗ ವಿಮಾನ ನಿಲ್ದಾಣಕ್ಕೆ ಶಂಕುಸ್ಥಾಪನೆ

16/6/20

■ ವಿಜಯವಾಣಿ ಸುದ್ದಿಜಾಲ ಬೆಂಗಳೂರು/ ಶಿವಮೊಗ್ಗ

ಮಲೆನಾಡು ಭಾಗದ ಏರ್ ಕನೆಕ್ಟಿವಿಟಿಗೆ ಮುಂಚಿನಿಂದಲೂ ಪ್ರಯತ್ನಿಸುತ್ತಿದ್ದ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಇದೀಗ ಆಡೆತಡೆಗಳನ್ನು ನಿವಾರಿಸಿ ವಿಮಾನ ನಿಲ್ದಾಣ ಕಾಮಗಾರಿಗೆ ಆನ್‌ಲೈನ್ ಮೂಲಕ ಚಾಲನೆ ನೀಡಿದ್ದಾರೆ.

ಸೋಮವಾರ ಗೃಹ ಕಚೇರಿ ಕೃಷ್ಣಾದಿಂದ ಚಾಲನೆ ನೀಡಿದ ಅವರು, ಜಿಲ್ಲೆಯ ಜನತೆಯ ಬಹುದಿನಗಳ ಕನಸಾಗಿದ್ದ ಶಿವಮೊಗ್ಗ ವಿಮಾನ ನಿಲ್ದಾಣ ನಿರ್ಮಾಣದಿಂದಾಗಿ ಜಿಲ್ಲೆಯ ಹಾಗೂ ಸುತ್ತಲಿನ ಜಿಲ್ಲೆಗಳ ಪ್ರವಾಸೋದ್ಯಮ ಹಾಗೂ ಕೈಗಾರಿಕಾ ಕ್ಷೇತ್ರದ ಅಭಿವೃದ್ಧಿಗೆ ಉತ್ತೇಜನ ದೊರೆಯುವ ನಿರೀಕ್ಷೆ ಹೊಂದಲಾಗಿದೆ ಎಂದರು. ಶಿವಮೊಗ್ಗ ತಾಲೂಕಿನ ಸೋಗಾನೆ ಗ್ರಾಮದಲ್ಲಿ 220 ಕೋಟಿ ರೂ. ವೆಚ್ಚದಲ್ಲಿ 662.38 ಎಕರೆ ಪ್ರದೇಶದಲ್ಲಿ ಸುಸಜ್ಜಿತ ವಿಮಾನ ನಿಲ್ದಾಣ ನಿರ್ಮಿಸಲಾಗುತ್ತಿದೆ. ಜಿಲ್ಲೆಯಲ್ಲಿ ಅನೇಕ ಅಭಿವೃದ್ಧಿ ಕಾಮಗಾರಿಗಳಿಗೆ ಚಾಲನೆ ನೀಡಲಾಗಿದೆ. ಸ್ಮಾರ್ಟ್‌ಸಿಟಿ ಯೋಜನೆಗೆ ವೇಗ ದೊರೆತಿದೆ. ನೀರಾವರಿ ಯೋಜನೆಗಳು, ಶಾಲೆಗಳ ಮೂಲಭೂತ ಸೌಲಭ್ಯ, ಕುಡಿಯುವ ನೀರು, ರಸ್ತೆ ಸಂಪರ್ಕ ಅನುಷ್ಠಾನಗೊಳಿಸಲಾಗುತ್ತಿದೆ. ಶಿವಮೊಗ್ಗ-ಶಿಕಾರಿಪುರ ರೈಲ್ವೆ ಮಾರ್ಗದ ಕಾಮಗಾರಿ ಪ್ರಗತಿಯಲ್ಲಿದೆ. ಸಿಗಂದೂರು ಬಳಿ ಶರಾವತಿ ಹಿನ್ನೀರಿಗೆ ಸೇತುವೆ ನಿರ್ಮಾಣ ಕಾರ್ಯ ಆರಂಭಿಸುವ ಮೂಲಕ ಜಿಲ್ಲೆಯ ಈ ಭಾಗದ ಜನರ ಬಹು ವರ್ಷಗಳ ಕನಸು ನನಸಾಗುತ್ತಿದೆ ಎಂದು ವಿವರಿಸಿದರು. ಲೋಕೋಪಯೋಗಿ ಸಚಿವ ಗೋವಿಂದ ಕಾರಜೋಳ ಮಾತನಾಡಿ, ಶಿವಮೊಗ್ಗದಲ್ಲಿ ಮುಖ್ಯ ಇಂಜಿನಿಯರ್ ಕೇಂದ್ರ ವಲಯ ಮತ್ತು ರಾಷ್ಟ್ರೀಯ ಹೆದ್ದಾರಿ

ವಿಜಯವಾಣಿ ಚಿತ್ರ

ಕರೊನಾ ಸೋಂಕು ಮೆಟ್ಟಿನಿಂತು ರಾಜ್ಯದಲ್ಲಿ ಅಭಿವೃದ್ಧಿ ಪರ್ವ ಮುಂದು ವರಿಸಬೇಕಿದೆ. ಇದಕ್ಕೆ ಎಲ್ಲರ ಸಹಕಾರವೂ ಅಗತ್ಯ.
| ಬಿ.ಎಸ್.ಯಡಿಯೂರಪ್ಪ ಮುಖ್ಯಮಂತ್ರಿ

ಸರ್ಕಾರದ ನಿರ್ಧಾರ

1. ಬೆಂಗಳೂರು ಹಾಗೂ ಸುತ್ತಮುತ್ತಲಿನ ಜಿಲ್ಲೆಗಳಲ್ಲಿ ಕೋವಿಡ್ 19 ನಿಯಂತ್ರಣಕ್ಕೆ ಸಂಬಂಧಿಸಿದಂತೆ ವಿಶೇಷ ಕಾರ್ಯಪಡೆ ರಚನೆ
2. ಬೆಂಗಳೂರಿನಲ್ಲಿ ಒಟ್ಟು 697 ಪ್ರಕರಣಗಳು ವರದಿಯಾಗಿವೆ. 330 ಸಕ್ರಿಯ ಪ್ರಕರಣಗಳಿದ್ದು, 6 ಜನ ಐಸಿಯುನಲ್ಲಿದ್ದಾರೆ
3. ಪರೀಕ್ಷಾ ಪ್ರಮಾಣ ಹೆಚ್ಚಿಸಲಾಗುತ್ತಿದೆ. ಈ ವರೆಗೆ ರಾಜ್ಯದಲ್ಲಿ 10 ಲಕ್ಷ ಜನಸಂಖ್ಯೆಗೆ 7100 ಪರೀಕ್ಷೆ ನಡೆಸಲಾಗಿದೆ. ಐಸಿಎಂಆರ್ ಮಾರ್ಗಸೂಚಿಯಂತೆ ಪರೀಕ್ಷೆ ನಡೆಸಲಾಗಿದೆ
4. ರಾಜ್ಯದಲ್ಲಿ ಸೋಂಕಿತರ ಸಾವಿನ ಪ್ರಮಾಣ ಕೇವಲ ಶೇ.1.2 ಪ್ರಮಾಣವಿದ್ದರೆ, ದೇಶದ್ದು ಶೇ. 2.8ರಷ್ಟಿದೆ. ರಾಜ್ಯದ ರಿಕವರಿ ರೇಟ್ ಶೇ.56 ಇದೆ. ಈ ವರೆಗೆ 4,40,684 ಟೆಸ್ಟ್ ಮಾಡಲಾಗಿದೆ.

ಖಾಸಗಿಯಲ್ಲೂ ಕೋವಿಡ್ ಚಿಕಿತ್ಸೆ

ಮೊದಲನೇ ಪುಟದಿಂದ...

ಖಾಸಗಿ ಆಸ್ಪತ್ರೆಗಳ ಸಹಕಾರವೂ ಬೇಕು. ಖಾಸಗಿ ಆಸ್ಪತ್ರೆಗಳಲ್ಲಿ ಕೋವಿಡ್ ಚಿಕಿತ್ಸಾ ಘಟಕ, ಐಸೋಲೇಷನ್ ವಾರ್ಡ್ ತೆರೆಯಲು ಅವಕಾಶ ನೀಡಲಾಗುತ್ತದೆ. ಜತೆಗೆ ದರವನ್ನು ಸರ್ಕಾರವೇ ನಿಗದಿ ಮಾಡುತ್ತದೆ ಎಂದು ಹೇಳಿದರು. ಟೆಸ್ಟಿಂಗ್‌ಗೆ ಕೂಡ ಏಕರೂಪ ದರ ನಿಗದಿ ಮಾಡಲಾಗುತ್ತದೆ. ಸುಲಿಗೆ ಮಾಡುವ ಆಸ್ಪತ್ರೆಗಳ ವಿರುದ್ಧ ಕಠಿಣಕ್ರಮ ಕೈಗೊಳ್ಳಲಾಗುತ್ತದೆ ಎಂದರು.

ಪಿಪಿಇ ಕಿಟ್ ಮುಂತಾದ ಉಪಕರಣಗಳ ಬಗ್ಗೆ ಯಾವುದೇ ಅನುಮಾನ ಬೇಡ. ಕೆಲವು ನರ್ಸ್‌ಗಳು ಐಸೋಲೇಶನ್ ವಾರ್ಡ್‌ಗಳಲ್ಲಿ ಕೆಲಸ ಮಾಡಲು ಮನಸ್ಸಿಲ್ಲದೆ ಉಪಕರಣದ ಬಗ್ಗೆ ಮಾತನಾಡಿದ್ದಾರೆ. ಅನುಮೋದನೆ ದೊರಕಿರುವ ಅಂತಾರಾಷ್ಟ್ರೀಯ ಗುಣಮಟ್ಟದ ಉಪಕರಣಗಳನ್ನೇ ಖರೀದಿಸಲಾಗುತ್ತಿದೆ. ತಾವೇ ಖುದ್ದಾಗಿ ಎಲ್ಲ ಜಿಲ್ಲೆಗಳಿಗೆ ಭೇಟಿ ನೀಡಿ ಪರಿವೀಕ್ಷಣೆ ನಡೆಸುತ್ತಿರುವುದಾಗಿ ಸಚಿವರು ತಿಳಿಸಿದರು. ಬೆಂಗಳೂರಿನಲ್ಲಿ 697 ಜನ ಸೋಂಕಿತರಲ್ಲಿ ಈಗ 330 ಸಕ್ರಿಯ ಪ್ರಕರಣಗಳಿವೆ. ಅದರಲ್ಲೂ ಐಸಿಯುನಲ್ಲಿ ಕೇವಲ 6 ಜನ ಮಾತ್ರ ಇದ್ದಾರೆ. ಕರೋನಾ ಸಾರ್ಸ್ ವೈರಾಣುವಿಗಿಂತ ಆಪಾಯಕಾರಿ ಅಲ್ಲ ಎಂದರು.